**ಸಿಸಿ ನಂಬರ: 128/2025**

**ಪಿ.ಡಬ್ಲ್ಯೂ: 1**

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾ: 31-07-2025**

**(ಸಾಕ್ಷಿಯ ಸ್ವಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲಾಗಿರುತ್ತದೆ)**

**ಮುಂದುವರೆದ ಮುಖ್ಯ ವಿಚಾರಣೆ : ಫಿರ್ಯಾದುದಾರರ ಪರ ಶ್ರೀ ಪಿ.ಜಿ.ಎನ್. ವಕೀಲರಿಂದ,**

ನನಗೆ ಈ ಪ್ರಕರಣವನ್ನು ನಡೆಸಲು ಫಿರ್ಯಾದಿ ಸೊಸೈಟಿಯವರು ಅಧಿಕಾರ ನೀಡಿರುವುದಕ್ಕೆ ಸಂಬಂಧಿಸಿದಂತೆ ಠರಾವಿನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಆರೋಪಿ ಕೊಟ್ಟ ಫೆಡರಲ್ ಬ್ಯಾಂಕಿನ ಚೆಕ್ಕ ಸಂಖ್ಯೆ 073627 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಚೆಕ್‌ನಲ್ಲಿರುವ ಆರೋಪಿಯ ಸಹಿಯನ್ನು ನಿಪಿ-2(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ನಿಪಿ-3 ಎಂದು, ಆರೋಪಿಗೆ ವಕೀಲರ ಮೂಲಕ ಕೊಟ್ಟ ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ-4, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಆರೋಪಿ ಕಳುಹಿಸಿದ ನೋಟಿಸು ಆತ ಸ್ವೀಕರಿಸದೇ ವಾಪಸ್ಸು ಬಂದಿರುವ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಸದ್ರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಿ ಅದನ್ನು ನಿಪಿ-6(ಎ) ಎಂದು, ಆರೋಪಿಯ ಸಾಲದ ಅರ್ಜಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-7 ಎಂದು, ಆರೋಪಿಯ ಸಾಲದ ಕರಾರಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-8 ಎಂದು, ಆರೋಪಿಯ ಸಾಲದ ಡಿಮಾಂಡ ಪ್ರೊಮಿಸರಿ ನೋಟಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-9 ಎಂದು, ಜಾಮೀನುದಾರರಿಂದ ಪಡೆದ ಭದ್ರತಾ ಪತ್ರದ ಯಥಾನಕಲುಗಳನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ 10 ಎಂದು, ಆರೋಪಿಗೆ ಸಾಲದ ಹಣ ಪಾವತಿ ಮಾಡಿದ ಬಾಬ್ತು ರಶೀದಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-11 ಎಂದು, ಸಾಲದ ಖಾತೆಯ ಸ್ಟೇಟಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು.

**(ನಿಪಿ 7 ರಿಂದ 11 ರ ಮೂಲ ದಾಖಲೆಗಳನ್ನು ಅವಶ್ಯಕತೆ ಇದ್ದಾಗ ಹಾಜರುಪಡಿಸಬೇಕೆಂಬ ಷರತ್ತಿಗೆ ಒಳಪಟ್ಟು ಸಾಕ್ಷಿಗೆ ವಾಪಸ್ಸು ನೀಡಲಾಯಿತು.)**

**ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ನ್ಯಾ.ದಂ., ಭಟ್ಕಳ**